# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ಭೋರುಕ ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಯಾಗಿರುವ 42.50 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 51 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಪತ್ರ ಸಂಖ್ಯೆ : ಇಎನ್ 55 ಎನ್‌ಸಿಇ 2014 ದಿನಾಂಕ : 23.07.2014
2) ಸರ್ಕಾರದ ಆದೇಶ ಸಂಖ್ಯೆ: ಇಎನ್ 188 ಎನ್‌ಸಿಇ 2014, ದಿನಾಂಕ:08.09.2014.
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/BPCL-4.8 MW/SANSUDDI/2013 B-1127.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಮೆ: ಭೋರುಕ ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಸನ್‌ಸುದ್ಧಿ ಗ್ರಾಮದಲ್ಲಿ 4.8 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು ತತ್ವಶಃ ಅನುಮೋದನೆ ನೀಡಲಾಗಿತ್ತು. ತದನಂತರ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಸದರಿ 4.8 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕದ ಸಾಮರ್ಥ್ಯವನ್ನು 42.50 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಿ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಮೆ:ಭೋರುಕ ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ರಾಯಬಾಗ್ ತಾಲ್ಲೂಕಿನ ಸಂಸುದಿ ಗ್ರಾಮದಲ್ಲಿ ಹಂಚಿಕೆಯಾಗಿರುವ 42.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 51 ಮೆ.ವ್ಯಾ. ಗೆ ಹೆಚ್ಚಿಸುವಂತೆ ಕೋರಿ ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿರುತ್ತಾರೆ ಮತ್ತು ನಿಯಮಾನುಸಾರ ಶುಲ್ಕಗಳನ್ನು ಪಾವತಿಸಿರುತ್ತಾರೆ. ಸದರಿ ಯೋಜನೆಯಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳುವುದಾಗಿ ಅಭಿವೃದ್ಧಿದಾರರು ತಿಳಿಸಿರುತ್ತಾರೆ. ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಮೆ:ಭೋರುಕ ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ರಾಯಬಾಗ್ ತಾಲ್ಲೂಕಿನ ಸಂಸುದಿ ಗ್ರಾಮದಲ್ಲಿ ಹಂಚಿಕೆಯಾಗಿದ್ದ 42.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 51 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 51 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 18.03.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಎನ್ 188 ಎನ್‌ಸಿಇ 2014, ದಿನಾಂಕ:08.09.2014 ರನ್ವಯ ಮೆ:ಭೋರುಕ ಪವರ್ ಕಾರ್ಪೋರೇಷನ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ರಾಯಬಾಗ್ ತಾಲ್ಲೂಕಿನ ಸನ್‌ಸುದ್ದಿ ಗ್ರಾಮದಲ್ಲಿ ಹಂಚಿಕೆಯಾಗಿರುವ 42.5 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು 51 ಮೆ.ವ್ಯಾಗೆ ಹೆಚ್ಚಿಸಿ ಆದೇಶಿಸಲಾಗಿದೆ.

315



**The Geographical area description 51 MW wind Power project is detailed in as below:**

| Sl. No. | Near by villages of the proposed area and district. | Geographical area description of the project | Sanctioned capacity in MW | Enhancement proposed in MW | Total capacity including proposed enhancedment in MW |
|---|---|---|---|---|---|
| 1 | Sansuddi, Byakud and Katajbhavi, Raybag Taluk, Belgaum district | The identified area is covered by Private land near Ghataprabha left canal and the road crossing towards Kanakanawadi to Raybag. The area is having several peaks and is covered in the following geographical co-ordinates are:<br>**Latitude:** 16°23'24.9"- 16°25'0"N<br>**Longitude:** 74°50'0"- 74°53'5.3"E<br>**Peaks:** 697 and 634 m Amsl<br>**Toposheet No 47 L / 15** | 42.5MW | 8.5 MW | 51 MW |

<u>ಷರತ್ತುಗಳು</u>

1 ಸದರಿ ಕಂಪನಿಯು ಸರ್ಕಾರಿ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ 06.1.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಸದರಿ ಕಂಪನಿಯು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಟ ಘಾಡುವ ಕುರಿತು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

3 ಸದರಿ ಕಂಪನಿಯು ಯೋಜನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಪಾವತಿಸಬೇಕಾಗಿರುವ ಎಲ್ಲಾ ತರಹದ ಶುಲ್ಕಗಳನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

4 ಕರ್ನಾಟಕ ಭೂಸುಧಾರಣ ಕಾಯ್ದೆ 1961ರ ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

5 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಉಳಿದಂತೆ ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 188 ಎನ್‌ಸಿಇ 2014 ದಿನಾಂಕ:08.09.2014 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

18.03

<u>ಇವರಿಗೆ:</u>

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

--3)

ಪ್ರತಿ:

ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ವಿಕಾಸ ಸೌಧ, ಬೆಂಗಳೂರು-1.

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ.

9 ಜಿಲ್ಲಾಧಿಕಾರಿ, ಬೆಳಗಾವಿ ಜಿಲ್ಲೆ, ಬೆಳಗಾವಿ.

10 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾವಿ ಪ್ರಾದೇಶಿಕ ವಿಭಾಗ, ಬೆಳಗಾವಿ.

11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

12 M/s. Bhoruka Power Corporation Limited, # 48, Lavelle Road, Bangalore-560001.

13 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

14 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

15 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.